# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 23 |
| ಮಾನ್ಯ ಸದಸ್ಯರ ಹೆಸರು | ಶ್ರೀ.ಯು.ಬಿ.ವೆಂಕಟೇಶ್<br>(ನಾಮ ನಿರ್ದೇಶನ ಹೊಂದಿದವರು) |
| ಉತ್ತರಿಸಬೇಕಾದ ದಿನಾಂಕ | 13.12.2021 |
| ಉತ್ತರಿಸುವ ಸಚಿವರು | ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಇಲಾಖೆ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯಕ್ಕೆ ಶಾಶ್ವತವಾದ ಹಾಗೂ ದೂರದೃಷ್ಟಿಯ ಹೆಲ್ತ್ ವಿಷನ್ ಅವಶ್ಯಕತೆ ಇರುವುದನ್ನು ಸರ್ಕಾರ ಮನಗಂಡಿದೆಯೇ; | ಹೌದು. |
| ಆ | ಆರೋಗ್ಯ ಕ್ಷೇತ್ರದ ಮೂಲಸೌಕರ್ಯಗಳ ಅಭಿವೃದ್ಧಿಗೆ ಜಿಲ್ಲಾವಾರು ಕೈಗೊಳ್ಳಬಹುದಾದ ಕ್ರಮಗಳೇನು; | **"ಅಮೃತ ಆರೋಗ್ಯ ಮೂಲಸೌಕರ್ಯಗಳ ಉನ್ನತೀಕರಣ"** ಯೋಜನೆಯಡಿಯಲ್ಲಿ ಒಂದು ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ರೂ. 20.00 ಲಕ್ಷದಂತೆ ರಾಜ್ಯದಲ್ಲಿನ 750 ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಗುರುತಿಸಿ ದುರಸ್ಥಿ ಹಾಗೂ ಮರುನಿರ್ಮಾಣ ಕಾರ್ಯಕ್ಕಾಗಿ ಕ್ರಮ ಕೈಗೊಳ್ಳಲಾಗಿದೆ ಹಾಗೂ 15ನೇ ಹಣಕಾಸು ಆಯೋಗದ ಶಿಫಾರಸ್ಸಿನಂತೆ 2021-22ನೇ ಸಾಲಿಗೆ ಬಿಡುಗಡೆಯಾಗಿರುವ **ರೂ.55153.00** ಲಕ್ಷಗಳ ಅನುದಾನವನ್ನು ಆರೋಗ್ಯ ವಲಯದ ಮೂಲ ಸೌಕರ್ಯಗಳ ಉನ್ನತೀಕರಣಕ್ಕೆ ಬಳಸಿಕೊಳ್ಳಲಾಗುತ್ತಿದೆ. ಅಲ್ಲದೇ ಆಯಾ ಜಿಲ್ಲೆಗಳ ಆರೋಗ್ಯ ರಕ್ಷಾ ಸಮಿತಿಯಡಿ ನಿಗದಿಯಾಗಿರುವ ಅನುದಾನವನ್ನು ಮೂಲ ಸೌಕರ್ಯಗಳ ಅಭಿವೃದ್ಧಿಗೆ ಬಳಸಿಕೊಳ್ಳಲಾಗುತ್ತಿದೆ. |
| ಇ | ಬದಲಾದ ಜೀವನಶೈಲಿಯಲ್ಲಿ ಯುವಜನತೆಯನ್ನು ಕಾಡುತ್ತಿರುವ ಹೃದ್ರೋಗದಂತಹ ಖಾಯಿಲೆಗಳ ತಪಾಸಣೆ ಹಾಗೂ ಗುಣಪಡಿಸುವಿಕೆ ನಿಟ್ಟಿನಲ್ಲಿ ಹಮ್ಮಿಕೊಳ್ಳಬಹುದಾದ ಕ್ರಿಯಾಯೋಜನೆಗಳೇನು? | ರಾಷ್ಟ್ರೀಯ ಕ್ಯಾನ್ಸರ್, ಮಧುಮೇಹ, ಹೃದಯ ರೋಗಗಳು ಮತ್ತು ಪಾರ್ಶ್ವವಾಯು **(NPCDCS- National Programme for prevention and control of Cancer, Diabetes, Cardiovascular Diseaes and Stroke)** ಕಾರ್ಯಕ್ರಮದಡಿಯಲ್ಲಿ ಪ್ರತಿ ವರ್ಷ 30 ವರ್ಷ ಮೇಲ್ಪಟ್ಟವರೆಲ್ಲರಿಗೂ ನಿಯಮಿತವಾಗಿ ಹೃದ್ರೋಗವನ್ನು ಒಳಗೊಂಡಂತೆ ರಕ್ತದೊತ್ತಡ, ಮಧುಮೇಹ, ಬಾಯಿ ಕ್ಯಾನ್ಸರ್, ಸ್ತನ ಕ್ಯಾನ್ಸರ್ ಹಾಗೂ ಗರ್ಭಕೋಶದ ಕ್ಯಾನ್ಸರ್ ನ ತಪಾಸಣೆಗೆ ಮಾಡಲಾಗುತ್ತಿದೆ ಹಾಗೂ ಈ ಕಾರ್ಯಕ್ರಮದಡಿಯಲ್ಲಿ ಪರೀಕ್ಷಿತರೆಲ್ಲ ವ್ಯಕ್ತಿಗಳಲ್ಲಿ ಅಸಾಂಕ್ರಾಮಿಕ ರೋಗಗಳಿಗೆ ಕಾರಣವಾಗುವ ಅಂಶಗಳ ಬಗ್ಗೆ ಸಮುದಾಯ ಆಧಾರಿತ ಸಮೀಕ್ಷಾ |

| | | |
|---|---|---|
| | | ಪಟ್ಟಿ (**CBAC-Community Based Assesment Checklist**) ಅನ್ನು ತಯಾರಿಸಿ ಎಲ್ಲಾ ದತ್ತಾಂಶವನ್ನು **CPHC-NCD app** ಅಳವಡಿಸಲಾಗುತ್ತದೆ.<br><br>ಒಟ್ಟಾರೆಯಾಗಿ ಈ ಕಾರ್ಯಕ್ರಮದಡಿಯಲ್ಲಿ ನೊಂದಣಿಯಾದ ಎಲ್ಲರಿಗೂ ಪ್ರತಿ ಗ್ರಾಮ ಮಟ್ಟದಲ್ಲಿ ಆರೋಗ್ಯ ಶಿಕ್ಷಣ ಕಾರ್ಯಕ್ರಮಗಳನ್ನು ಹಮ್ಮಿಕೊಂಡು, ತಪಾಸಣಾ ಶಿಬಿರಗಳನ್ನು ಏರ್ಪಡಿಸಿ, ರೋಗವನ್ನು ಶೀಘ್ರ ಪತ್ತೆ ಮಾಡುವ ಮೂಲಕ ರೋಗಿಗಳಿಗೆ ಉಚಿತ ಚಿಕಿತ್ಸೆ ನೀಡಲಾಗುತ್ತಿದೆ. ಈ ಮೂಲಕ ಸಮುದಾಯ ಮಟ್ಟದಲ್ಲಿ ಹೃದಯಾಘಾತ, ಪಾರ್ಶ್ವವಾಯು ಹಾಗೂ ಮೂತ್ರಪಿಂಡ ವೈಫಲ್ಯ ಇತ್ಯಾದಿಗಳನ್ನು ತಡೆಗಟ್ಟಲು ಶ್ರಮಿಸಲಾಗುತ್ತಿದೆ. |

**ಆಕುಕ 172 ಎಸ್ಎಂಎಂ 2021**

(ಡಾ||ಕೆ. ಸುಧಾಕರ್)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ
ವೈದ್ಯಕೀಯ ಶಿಕ್ಷಣ ಸಚಿವರು